# ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ : ಕೇಂದ್ರ ಕಛೇರಿ : ಬೆಂಗಳೂರು

ಸಂಖ್ಯೆ:ಕರಾಸಾ/ಕೇಕ/ನೇಮಕ/ಸಿ2/ **1876** /2015-16 ದಿನಾಂಕ 06.01.2016.

## ಜಾಹೀರಾತು ಸಂಖ್ಯೆ : 2/2016

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದಲ್ಲಿ ಅವಶ್ಯಕವಿರುವ ವಿಭಾಗ ಮಟ್ಟದ ಮೇಲ್ವಿಚಾರಕೇತರ ಹುದ್ದೆಗಳಾದ ಕುಶಲಕರ್ಮಿ ಹಾಗೂ ತಾಂತ್ರಿಕ ಸಹಾಯಕ ದರ್ಜೆ-3 ನೇರ ನೇಮಕಾತಿ ಹುದ್ದೆಗಳನ್ನು, ಸಂಸ್ಥೆಯ ಪದವೃಂದ ಮತ್ತು ನೇಮಕಾತಿ ನಿಯಮಾವಳಿ 1982 ಮತ್ತು ತದನಂತರದ ತಿದ್ದುಪಡಿಗಳ ಅನುಸಾರ ನೇರ ನೇಮಕಾತಿಯ ಮೂಲಕ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಆನ್ ಲೈನ್ (ON LINE) ಮುಖಾಂತರ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಹುದ್ದೆವಾರು ಹುದ್ದೆಗಳ ಮೀಸಲಾತಿ ವರ್ಗೀಕರಣವನ್ನು ಕ್ರೋಢೀಕರಿಸಿ ಈ ಕೆಳಗಿನಂತೆ ಖಾಲಿ ಹುದ್ದೆಗಳನ್ನು ಪ್ರಕಟಿಸಲಾಗಿದೆ.

### I. ಹುದ್ದೆಗಳ ವರ್ಗೀಕರಣ : 1. ಕುಶಲಕರ್ಮಿ: ದರ್ಜೆ-3 ಹುದ್ದೆಗಳು

**ವೃತ್ತಿ : ಆಟೋ ಮೆಕ್ಯಾನಿಕ್**

| | ಪ.ಜಾ | ಪ.ಪಂ | 1 | 2ಎ | 2ಬಿ | 3ಎ | 3ಬಿ | ಸಾ.ಅ | ಒಟ್ಟು |
|---|---|---|---|---|---|---|---|---|---|
| **ಸಾಮಾನ್ಯ** | 9 | 1 | 1 | 8 | 3 | 2 | 1 | 17 | **42** |
| **ಮಹಿಳೆ** | 5 | 5 | 2 | 6 | 5 | 4 | 5 | 21 | **53** |
| **ಗ್ರಾಮೀಣ** | 7 | 1 | 0 | 7 | 2 | 0 | 2 | 18 | **37** |
| **ಮಾ.ಸೈ.** | 2 | 0 | 0 | 2 | 0 | 0 | 0 | 8 | **12** |
| **ಕ.ಮಾ.** | 0 | 0 | 0 | 0 | 0 | 0 | 0 | 3 | **3** |
| **ಯೋ.ಅ** | 0 | 0 | 0 | 0 | 0 | 0 | 0 | 4 | **4** |
| **ಅಂಗವಿಕಲ** (Hearing Impaired) | 2 | 0 | 0 | 2 | 0 | 0 | 0 | 5 | **9** |
| **ಒಟ್ಟು** | **25** | **7** | **3** | **25** | **10** | **6** | **8** | **76** | **160** |

**ವೃತ್ತಿ : ಆಟೋ ಬಾಡಿ ಬಿಲ್ಡರ್**

| | ಹಿಂಬಾಕಿ | | | | | | | | | | | |
|---|---|---|---|---|---|---|---|---|---|---|---|---|
| | ಪ.ಪಂ | 1 | ಒಟ್ಟು | ಪ.ಜಾ | ಪ.ಪಂ | 1 | 2ಎ | 2ಬಿ | 3ಎ | 3ಬಿ | ಸಾ.ಅ | ಒಟ್ಟು |
| **ಸಾಮಾನ್ಯ** | 2 | 2 | 4 | 2 | 6 | 6 | 3 | 2 | 1 | 0 | 1* | **21** |
| **ಮಹಿಳೆ** | 0 | 0 | 0 | 4 | 0 | 0 | 1 | 0 | 0 | 0 | 9 | **14** |
| **ಗ್ರಾಮೀಣ** | 0 | 0 | 0 | 1 | 0 | 0 | 0 | 0 | 0 | 0 | 6 | **7** |
| **ಅಂಗವಿಕಲ** (Hearing Impaired / Leprosy cured) | 0 | 0 | 0 | 0 | 0 | 0 | 0 | 0 | 0 | 0 | 2 | **2** |
| **ಒಟ್ಟು** | **2** | **2** | **4** | **7** | **6** | **6** | **4** | **2** | **1** | **0** | **18** | **44** |

**ಟಿಪ್ಪಣಿ:** * ಜಾಹೀರಾತು ಸಂ 2/2010 ದಿನಾಂಕ 27.12.2010 ರಲ್ಲಿ ವರ್ಗ-1 ಮೀಸಲಾತಿಯಲ್ಲಿ ಪ್ರಕಟಿಸಿದ್ದ 2 ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಿಲ್ಲದ ಕಾರಣ ಭರ್ತಿಯಾಗಿರುವುದಿಲ್ಲ ಸದರಿ ಹುದ್ದೆಗಳನ್ನು ಸಾಮಾನ್ಯ ಅಭ್ಯರ್ಥಿಗಳಿಂದ ಸರಿದೂಗಿಸಲಾಗಿದ್ದು, ಪ್ರಸ್ತುತ ಸರ್ಕಾರದ ಆದೇಶ ಸಂ.ಸಿಆಸುಇ 3 ಸೆಹಿಮ 2014 ದಿನಾಂಕ 03.10.2015 ರಂತೆ ಸಾಮಾನ್ಯ ಮೀಸಲಾತಿಯ 2 ಹುದ್ದೆಗಳನ್ನು ಕಡಿತಗೊಳಿಸಿ ವರ್ಗ-1 ಮೀಸಲಾತಿಗೆ 2 ಹುದ್ದೆಗಳನ್ನು ಹಿಂಬಾಕಿಯಾಗಿ ಜಾಹೀರಾತಿನಲ್ಲಿ ಪ್ರಕಟಿಸಲಾಗಿದೆ.

**ವೃತ್ತಿ : ಆಟೋ ಎಲೆಕ್ಟ್ರೀಷನ್**

| | ಪ.ಜಾ | ಪ.ಪಂ | 1 | 2ಎ | 2ಬಿ | 3ಎ | 3ಬಿ | ಸಾ.ಅ | ಒಟ್ಟು |
|---|---|---|---|---|---|---|---|---|---|
| ಸಾಮಾನ್ಯ | 1 | 1 | 4 | 2 | 3 | 4 | 2 | 6 | 23 |
| ಮಹಿಳೆ | 3 | 0 | 1 | 4 | 0 | 0 | 0 | 10 | 18 |
| ಗ್ರಾಮೀಣ | 3 | 0 | 0 | 1 | 0 | 0 | 0 | 8 | 12 |
| ಮಾ.ಸೈ. | 0 | 0 | 0 | 0 | 0 | 0 | 0 | 2 | 2 |
| ಅಂಗವಿಕಲ (Hearing impaired) | 1 | 0 | 0 | 0 | 0 | 0 | 0 | 4 | 5 |
| ಒಟ್ಟು | 8 | 1 | 5 | 7 | 3 | 4 | 2 | 30 | 60 |

**ವೃತ್ತಿ : ಆಟೋ ಪೇಂಟರ್**

| | ಹಿಂಬಾಕಿ | | | ಪ.ಜಾ | ಪ.ಪಂ | 1 | 2ಎ | 2ಬಿ | 3ಎ | 3ಬಿ | ಸಾ.ಅ | ಒಟ್ಟು |
|---|---|---|---|---|---|---|---|---|---|---|---|---|
| | ಪ.ಜಾ | ಪ.ಪಂ | ಒಟ್ಟು | | | | | | | | | |
| ಸಾಮಾನ್ಯ | 3 | 1 | 4 | 1 | 0 | 0 | 0 | 0 | 0 | 0 | 2 | 3 |
| ಮಹಿಳೆ | 0 | 0 | 0 | 0 | 0 | 0 | 0 | 0 | 0 | 0 | 1 | 1 |
| ಒಟ್ಟು | 3 | 1 | 4 | 1 | 0 | 0 | 0 | 0 | 0 | 0 | 3 | 4 |

**ವೃತ್ತಿ : ಆಟೋ ವೆಲ್ಡರ್**

| | ಹಿಂಬಾಕಿ | | | | ಪ.ಜಾ | ಪ.ಪಂ | 1 | 2ಎ | 2ಬಿ | 3ಎ | 3ಬಿ | ಸಾ.ಅ | ಒಟ್ಟು |
|---|---|---|---|---|---|---|---|---|---|---|---|---|---|
| | ಪ.ಪಂ | 1 | 2ಎ | ಒಟ್ಟು | | | | | | | | | |
| ಸಾಮಾನ್ಯ | 1 | 3 | 1 | 5 | 1 | 1 | 2 | 1 | 1 | 0 | 0 | 1 | 7 |
| ಮಹಿಳೆ | 0 | 0 | 0 | 0 | 1 | 0 | 0 | 0 | 0 | 0 | 0 | 4 | 5 |
| ಗ್ರಾಮೀಣ | 0 | 0 | 0 | 0 | 0 | 0 | 0 | 0 | 0 | 0 | 0 | 3 | 3 |
| ಒಟ್ಟು | 1 | 3 | 1 | 5 | 2 | 1 | 2 | 1 | 1 | 0 | 0 | 8 | 15 |

**ಟಿಪ್ಪಣಿ:** * ಜಾಹೀರಾತು ಸಂ 2/2010 ದಿನಾಂಕ 27.12.2010 ರಲ್ಲಿ ವರ್ಗ-1 ಮೀಸಲಾತಿಯಲ್ಲಿ 3 ಹಾಗೂ ಪ್ರವರ್ಗ-2ಎ ಮೀಸಲಾತಿಯಲ್ಲಿ ಒಂದು ಹುದ್ದೆಗಳಗೆ ಅರ್ಹ ಅಭ್ಯರ್ಥಿಗಳು ಲಭ್ಯವಿಲ್ಲದ ಕಾರಣ ಭರ್ತಿಯಾಗಿರುವುದಿಲ್ಲ. ಪ್ರಸ್ತುತ ಸರ್ಕಾರದ ಆದೇಶ ಸಂ.ಸಿಆಸುಇ 3 ಸೆಹಿಮ 2014 ದಿನಾಂಕ 03.10.2015 ರಂತೆ ವರ್ಗ-1 ಮೀಸಲಾತಿಗೆ 3 ಹಾಗೂ ಪ್ರವರ್ಗ-2ಎ ಮೀಸಲಾತಿಗೆ ಒಂದು ಹುದ್ದೆಗಳನ್ನು ಹಿಂಬಾಕಿಯಾಗಿ ಜಾಹೀರಾತಿನಲ್ಲಿ ಪ್ರಕಟಿಸಲಾಗಿದೆ.

**ವೃತ್ತಿ : ಆಟೋ ಮೆಷಿನಿಷ್ಟ್**

| | ಪ.ಜಾ | ಪ.ಪಂ | 1 | 2ಎ | 2ಬಿ | 3ಎ | 3ಬಿ | ಸಾ.ಅ | ಒಟ್ಟು |
|---|---|---|---|---|---|---|---|---|---|
| ಸಾಮಾನ್ಯ | 1 | 0 | 0 | 0 | 0 | 0 | 0 | 0 | 1 |

## 2. ತಾಂತ್ರಿಕ ಸಹಾಯಕ : ದರ್ಜೆ 3 ಹುದ್ದೆಗಳು

| | ಪ.ಜಾ | ಪ.ಪಂ | 1 | 2ಎ | 2ಬಿ | 3ಎ | 3ಬಿ | ಸಾ.ಅ | ಒಟ್ಟು |
|---|---|---|---|---|---|---|---|---|---|
| ಸಾಮಾನ್ಯ | 19 | 3 | 7 | 17 | 5 | 3 | 6 | 57 | 117 |
| ಮಹಿಳೆ | 26 | 5 | 8 | 26 | 7 | 9 | 10 | 84 | 175 |
| ಗ್ರಾಮೀಣ | 18 | 3 | 7 | 19 | 6 | 6 | 9 | 68 | 136 |
| ಮಾ.ಸೈ. | 8 | 0 | 0 | 8 | 0 | 0 | 0 | 25 | 41 |
| ಕ.ಮಾ. | 3 | 0 | 0 | 3 | 0 | 0 | 0 | 14 | 20 |
| ಯೋ.ಅ | 5 | 0 | 0 | 6 | 0 | 0 | 0 | 13 | 24 |
| ಅಂಗವಿಕಲ (Hearing Impaired / Leprosy cured) | 6 | 5 | 2 | 5 | 2 | 5 | 3 | 15 | 43 |
| ಒಟ್ಟು | 85 | 16 | 24 | 84 | 20 | 23 | 28 | 276 | 556 |

(ಮೇಲ್ಕಂಡ ಹುದ್ದೆಗಳ ವರ್ಗೀಕರಣವು ತಾತ್ಕಾಲಿಕವಾಗಿದ್ದು, ಅವಶ್ಯಕತೆ ಅನುಗುಣವಾಗಿ ಮಾರ್ಪಡಿಸಬಹುದಾಗಿದೆ. ಆಯ್ಕೆ ಹೊಂದಿದ ಅಭ್ಯರ್ಥಿಗಳನ್ನು ಕ.ರಾ.ರ.ಸಾ.ನಿಗಮದ ವ್ಯಾಪ್ತಿಯಲ್ಲಿ ಬರುವ ಪ್ರಾದೇಶಿಕ ಕಾರ್ಯಾಗಾರ, ಬೆಂಗಳೂರು/ಹಾಸನ, ಬೆಂಗಳೂರು ಕೇಂದ್ರೀಯ, ರಾಮನಗರ, ಮಂಡ್ಯ, ಮೈಸೂರು ನಗರ ಸಾರಿಗೆ, ಮೈಸೂರು ಗ್ರಾಮಾಂತರ, ಚಾಮರಾಜನಗರ, ದಾವಣಗೆರೆ, ಕೋಲಾರ, ಚಿಕ್ಕಬಳ್ಳಾಪುರ, ಹಾಸನ, ತುಮಕೂರು, ಚಿಕ್ಕಮಗಳೂರು, ಮಂಗಳೂರು, ಪುತ್ತೂರು ವಿಭಾಗಗಳ ವ್ಯಾಪ್ತಿಯಲ್ಲಿ ಬರುವ ಯಾವುದೇ ಕಚೇರಿ/ ಘಟಕಗಳಿಗೆ ನಿಯೋಜಿಸಬಹುದಾಗಿರುತ್ತದೆ. ಆಯ್ಕೆಯಾದ ಅಭ್ಯರ್ಥಿಗಳು ಕ.ರಾ.ರ.ಸಾ.ನಿಗಮಯಿಂದ ಇತರೆ ಸಂಸ್ಥೆಗಳಾದ ವಾ.ಕ.ರ.ಸಾ.ಸಂಸ್ಥೆ, ಬೆಂ.ಮ.ಸಾ.ಸಂಸ್ಥೆ ಮತ್ತು ಈ.ಕ.ರ.ಸಾ.ಸಂಸ್ಥೆಗಳಿಗೆ ವರ್ಗಾವಣೆ ಹೊಂದಲು ಅವಕಾಶವಿರುವುದಿಲ್ಲ.)

**ಮಾ.ಸೈ.=ಮಾಜಿ ಸೈನಿಕ, ಕ.ಮಾ.ಅ = ಕನ್ನಡ ಮಾಧ್ಯಮ ಅಭ್ಯರ್ಥಿ, ಯೋ.ಅ = ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ**

## II. ಅರ್ಹತೆಗಳು

(ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ 04.02.2016 ರೊಂದಿಗೆ)

1. **ಶೈಕ್ಷಣಿಕ ವಿದ್ಯಾರ್ಹತೆ :**

| ಹುದ್ದೆ | ವಿದ್ಯಾರ್ಹತೆ |
|---|---|
| ಕುಶಲಕರ್ಮಿ (ಆಟೋ ಮೆಕ್ಯಾನಿಕ್ ಆಟೋ ಮೆಷಿನಿಷ್ಟ ಆಟೋ ವೆಲ್ಡರ್ ಆಟೋ ಪೈಂಟರ್ ಆಟೋ ಬಾಡಿ ಬಿಲ್ಡರ್) | ಅ. ಸರ್ಕಾರದಿಂದ ಮಾನ್ಯತೆ ಪಡೆದ ಒಂದು ಸಂಸ್ಥೆಯಿಂದ ಮೆಕ್ಯಾನಿಕಲ್ / ಆಟೋ ಮೊಬೈಲ್/ವೆಲ್ಡಿಂಗ್ ಅಂಡ್ ಶೀಟ್ ಮೆಟಲ್ ಟೆಕ್ನಾಲಜಿಯಲ್ಲಿ ಮೂರು ವರ್ಷದ ಇಂಜಿನಿಯರಿಂಗ್ ಡಿಪ್ಲೊಮಾ ಪಡೆದಿರಬೇಕು.<br><br>ಆ. ಚಾಲ್ತಿಯಲ್ಲಿರುವ ಭಾರಿವಾಹನ ಚಾಲನಾ ಪರವಾನಗಿ ಹೊಂದಿರಬೇಕು ಅಥವಾ ಪರೀಕ್ಷಾರ್ಥ ಅವಧಿ ಮುಗಿಯುವುದರೊಳಗೆ ಹೊಂದತಕ್ಕದ್ದು.<br><br>a. Must be a holder of three years course in Diploma from a recognized institution in Mechanical/Automobile/Welding & Sheet metal technology Engineering.<br><br>b. Must possess a valid current H.T.V. license or obtain one before completion of the period of Probation. |

| | |
|---|---|
| ಕುಶಲಕರ್ಮಿ<br>(ಆಟೋ ಎಲೆಕ್ಟ್ರೀಷಿಯನ್) | ಅ. ಸರ್ಕಾರದಿಂದ ಮಾನ್ಯತೆ ಪಡೆದ ಒಂದು ಸಂಸ್ಥೆಯಿಂದ ಎಲೆಕ್ಟ್ರಿಕಲ್ /ಎಲೆಕ್ಟ್ರಿಕಲ್ ಅಂಡ್ ಎಲೆಕ್ಟ್ರಾನಿಕ್ಸ್/ ಮೆಕಟ್ರಾನಿಕ್ಸ್ ಇಂಜನಿಯರಿಂಗ್ / ರೆಫ್ರಿಜಿರೇಷನ್ ಅಂಡ್ ಏರ್‌ಕಂಡೀಷನಿಂಗ್‌ನಲ್ಲಿ ಮೂರು ವರ್ಷದ ಇಂಜಿನಿಯರಿಂಗ್ ಡಿಪ್ಲೊಮಾ ಪಡೆದಿರಬೇಕು.<br><br>ಆ. ಚಾಲ್ತಿಯಲ್ಲಿರುವ ಭಾರಿವಾಹನ ಚಾಲನಾ ಪರವಾನಗಿ ಹೊಂದಿರಬೇಕು ಅಥವಾ ಪರೀಕ್ಷಾರ್ಥ ಅವಧಿ ಮುಗಿಯುವುದರೊಳಗೆ ಹೊಂದತಕ್ಕದ್ದು.<br><br>a. Must be a holder of three years course in Diploma from a recognized institution in Electrical/Electrical & Electronics/Mechatronics Engineering/ Refrigeration and Air Conditioning.<br><br>b. Must possess a valid current H.T.V. license or obtain one before completion of the period of Probation. |
| ತಾಂತ್ರಿಕ ಸಹಾಯಕ | ಅ. ಪ್ರೌಢ ಶಿಕ್ಷಣ ಮಂಡಳಿಯಿಂದ ಎಸ್.ಎಸ್.ಎಲ್.ಸಿ. ಉತ್ತೀರ್ಣರಾದ ನಂತರ ತಾಂತ್ರಿಕ ಮಂಡಳಿ ಅಥವಾ ಸರ್ಕಾರದಿಂದ ಅಂಗೀಕೃತವಾದ ಸಂಸ್ಥೆಯಲ್ಲಿ ಐ.ಟಿ.ಸಿ. /ಐ.ಟಿ.ಐ. / ಎನ್‌ಎಸಿಯನ್ನು ಮೆಕ್ಯಾನಿಕ್ (ಮೋಟಾರ್ ವೆಹಿಕಲ್) / ಡೀಸಲ್ ಮೆಕ್ಯಾನಿಕ್ / ಆಟೋ ಎಲೆಕ್ಟ್ರೀಷಿಯನ್ / ವೆಲ್ಡರ್ / ಶೀಟ್ ಮೆಟಲ್ ವರ್ಕರ್ / ಎಲೆಕ್ಟ್ರಾನಿಕ್ ಮೆಕ್ಯಾನಿಕ್/ ಅಪೋಲ್‌ಸ್ಟ್ರಿ / ಡ್ರಾಫ್ಟ್ಸ್ ಮ್ಯಾನ್ (ಮೆಕ್ಯಾನಿಕಲ್) / ಫಿಟ್ಟರ್ / ಮೆಷಿನಿಸ್ಟ್ / ಟೈರ್ ಫಿಟ್ಟಿಂಗ್ / ವಲ್ಕನೈಸಿಂಗ್ / ಪೈಂಟಿಂಗ್ / ರೆಫ್ರಿಜರೇಷನ್ ಎಂಡ್ ಏರ್‌ಕಂಡೀಷನಿಂಗ್ / ಟರ್ನರ್ / ಆಟೋಮೊಬೈಲ್ / ಎಲೆಕ್ಟ್ರಿಕಲ್ / ಎಲೆಕ್ಟ್ರಾನಿಕ್ಸ್ / ಫ್ಯಾಬ್ರಿಕೇಷನ್ (ಫಿಟ್ಟಿಂಗ್ ಎಂಡ್ ವೆಲ್ಡಿಂಗ್) ವೃತ್ತಿಗಳಲ್ಲಿ ವಿದ್ಯಾರ್ಹತೆಯನ್ನು ಹೊಂದಿರಬೇಕು.<br><br>ಆ. ಪರೀಕ್ಷಾರ್ಥ ಅವಧಿ ಮುಗಿಯುವುದರೊಳಗಾಗಿ ಲಘು ವಾಹನ ಮೋಟಾರು ವಾಹನ ಚಾಲನಾ ಪರವಾನಗಿ ಪಡೆಯತಕ್ಕದ್ದು.<br><br>a. A pass in ITC/ITI/NAC in Mechanic (motor Vehicle) /Diesel Mechanic/Auto Electrician/Welder/ Sheet Metal Worker/Electronic-Mechanic/Upholstry/Draftsman(mechanical)/ Fitter/Machinist/Tyre fitting/ Vulcanizing/painting/Refrigeration and Air Conditioning/ Turner/Automobile/Electrical/Electronics/ Fabrication (Fitting & Welding) from an institution recognized by the Technical Board/ or the Government after a pass in secondary board education.<br><br>b. Shall obtain Light Motor Vehicle Driving license before completion of the Probationary period. |

| ವಿದ್ಯಾರ್ಹತೆ ಕುರಿತ ಸೂಚನೆ : (ತಾಂತ್ರಿಕ ಸಹಾಯಕ ) |
|---|
| ಅ) ಅಪೋಲ್‌ಸ್ಟ್ರಿ (ಹೊಲಿಗೆ) ವೃತ್ತಿಗೆ ಕ್ಲಾತಿಂಗ್ ಅಂಡ್ ಎಂಬ್ರಾಯಿಡರಿ ಹಾಗೂ ಕಟ್ಟಿಂಗ್ ಮತ್ತು ಸೂಯಿಂಗ್ ವೃತ್ತಿಗಳನ್ನು ಪರಿಗಣಿಸಲಾಗುವುದಿಲ್ಲ.<br>ಆ) ಆಟೋ ಎಲೆಕ್ಟ್ರಿಶಿಯನ್ ವೃತ್ತಿಗೆ ಎಲೆಕ್ಟ್ರಿಕಲ್ ವೈರಿಂಗ್ ಅಪ್ಲೈಯನ್ಸಸ್ ವೃತ್ತಿಯನ್ನು ಪರಿಗಣಿಸಲಾಗುವುದಿಲ್ಲ.<br>ಇ) ಮೇಲ್ಕಾಣಿಸಿದ ವೃತ್ತಿಗಳಲ್ಲದೆ ಬೇರೆ ಯಾವುದೇ ವೃತ್ತಿಗಳನ್ನು ಆಯ್ಕೆಗೆ ಪರಿಗಣಿಸಲಾಗುವುದಿಲ್ಲ. |

[ವಿ.ಸೂಚನೆ ಃ ಕುಶಲಕರ್ಮಿ ಹುದ್ದೆಗೆ ಆಯ್ಕೆ ಹೊಂದಿದ ಅಭ್ಯರ್ಥಿಗಳು ಅವರು ನೇಮಕಾತಿ ಹೊಂದಿದ ದಿನಾಂಕದಿಂದ ಖಾಯಂಪೂರ್ವ ಪರೀಕ್ಷಾರ್ಥ ಸೇವೆ ಪೂರ್ಣಗೊಳ್ಳುವ ಮುನ್ನ ಗಣಕಯಂತ್ರ ಜ್ಞಾನವನ್ನು ಕಡ್ಡಾಯವಾಗಿ ಪಡೆಯಬೇಕಾಗುತ್ತದೆ. ಈ ವಿಷಯದಲ್ಲಿ ಕಿಯೋನಿಕ್ಸ್ ಸಂಸ್ಥೆಯಿಂದ ಅಥವಾ ಕರ್ನಾಟಕ ಸರ್ಕಾರದಿಂದ ಅಂಗೀಕೃತವಾದ ಇತರೆ ಸಂಸ್ಥೆಗಳಿಂದ ಕನ್ನಡ ಸಾಫ್ಟವೇರ ಮೂಲಕ ಎಂ.ಎಸ್.ಆಫೀಸ್ ಮತ್ತು ಡೆಸ್ಕ್‌ಟಾಪ್ ಪಬ್ಲಿಷಿಂಗ್ ವಿಷಯದಲ್ಲಿ ಪರಿಣಿತಿ ಪಡೆದು ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಹಾಜರುಪಡಿಸಬೇಕಾಗುತ್ತದೆ.]

2. ವಯೋಮಿತಿ:

ಅರ್ಜಿಗಳನ್ನು ಸ್ವೀಕರಿಸಲು ನಿಗಧಿಪಡಿಸಿದ ಕೊನೆಯ ದಿನಾಂಕ 04.02.2016 ರಂದು,

ಅ. ಕನಿಷ್ಠ 18 ವರ್ಷಗಳು ಪೂರ್ಣಗೊಂಡಿರಬೇಕು.

ಆ. ಗರಿಷ್ಠ ವಯೋಮಿತಿ ಈ ಕೆಳಕಾಣಿಸಿದ ವಯಸ್ಸು ಮೀರಿರಬಾರದು.

| ವರ್ಗ | ವಯಸ್ಸು |
|---|---|
| ಸಾಮಾನ್ಯ ವರ್ಗ | 35 ವರ್ಷಗಳು |
| 2ಎ/2ಬಿ/3ಎ/3ಬಿ | 38 ವರ್ಷಗಳು |
| ಪ.ಜಾತಿ/ಪ.ಪಂ/ ವರ್ಗ-1 | 40 ವರ್ಷಗಳು |

ಇ. ಇಲಾಖಾ ಅಭ್ಯರ್ಥಿಗಳು ಅವರು ಸಲ್ಲಿಸಿರುವ ಸೇವಾವಧಿಯ ಗರಿಷ್ಠ 10 ವರ್ಷಗಳಿಗೆ ಮೀರದಂತೆ ವಯೋಮಿತಿ ರಿಯಾಯಿತಿಗೆ ಅರ್ಹರು ಮತ್ತು ರಿಯಾಯಿತಿಗೆ ಅವರ ವಯಸ್ಸು 45 ವರ್ಷ ಮೀರಿರಬಾರದು.

ಈ. ಮಾಜಿ ಸೈನಿಕರಿಗೆ ಸಂಬಂಧಿಸಿದಂತೆ ಈ ಕೆಳಕಂಡ ಪರಿಭಾಷೆಯನ್ನು ಹೊಂದಿರತಕ್ಕದ್ದು:

"EX-SERVICEMEN" means a person, who has served in any rank (whether as a combatant or as a non-combatant) in the regular Army, Navy and Air Forces of the Union but does not include a person who has served in the Defence Security Corps, the General Reserve Engineering Force, the Lok Sahayak Sene and Para Military Forces and

a) Who has retired from such services earning his pension, or
b) Who has been released from such service on Medical Grounds attributable to military service or circumstances beyond his control and awarded medical or other disability pensions, or
c) Who has been released otherwise than on his own request from such service as a result of reduction in Establishment, or
d) Who has been released from such service after completing the specific period of engagement otherwise than at his own request or by way of dismissal or discharge on account of mis-conduct or in-efficiency and has been given a gratuity and includes personnel of the Territorial Army of the following categories, namely:

(i) Pension holders for continuous embodied service
(ii) Pension with disability attributable to military service; and
(iii) Gallantry award winners

In respect of Ex-Servicemen, by three years plus by the number of years of service rendered by him in Armed Forces of the Union subject to the condition the Ex-servicemen shall not have completed 45 years of age.

3. ದೇಹದಾರ್ಢ್ಯತೆ :

ಮೇಲ್ಕಂಡ ಹುದ್ದೆಗಳಿಗೆ ಅರ್ಜಿ ಸಲ್ಲಿಸಬಯಸುವ ಅಭ್ಯರ್ಥಿಗಳು ಈ ಕೆಳಕಂಡ ಕನಿಷ್ಠ ದೇಹದಾರ್ಢ್ಯತೆಯನ್ನು ಕಡ್ಡಾಯವಾಗಿ ಹೊಂದಿರಬೇಕು.

| | ಪುರುಷರು | ಮಹಿಳೆಯರು |
|---|---|---|
| ಎತ್ತರ | 163 ಸೆಂ.ಮೀ | 153 ಸೆ.ಮೀ |
| ತೂಕ | 55 ಕೆ.ಜಿ | 50 ಕೆ.ಜಿ |

## III. ಮೀಸಲಾತಿಗಳು

**1. ಪ್ರವರ್ಗ ಮೀಸಲಾತಿ** ಕೋರುವ ಅಭ್ಯರ್ಥಿಗಳು ಸರ್ಕಾರದ ಅಧಿಸೂಚನೆ ಸಂಖ್ಯೆ:ಎಸ್‌ಡಬ್ಲ್ಯೂಡಿ 225 ಎಸ್‌ಟಿಸಿ 2002 ದಿನಾಂಕಃ 11-03-2002 ರನ್ವಯ ದಿನಾಂಕಃ 11-03-2002ರ ನಂತರ ಮತ್ತು 5 ವರ್ಷದೊಳಗೆ ಹಾಗೂ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿರುವ

ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ನಮೂನೆ-"ಎಫ್"ನ್ನು ಹೊಂದಿದ್ದಲ್ಲಿ ಮಾತ್ರ 2ಎ, 2ಬಿ, 3ಎ, 3ಬಿ ಗುಂಪಿನ ಮೀಸಲಾತಿ ಸೌಲಭ್ಯಕ್ಕೆ ಅರ್ಹರಿರುತ್ತಾರೆ.

**2. ಪ.ಜಾ/ಪ.ಪಂ ಮತ್ತು ವರ್ಗ-1 ಮೀಸಲಾತಿ** ಃ **ಎ) ಪಜಾ/ಪಪಂ ಮೀಸಲಾತಿ** ಸೌಲಭ್ಯ ಕೋರುವ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಜಾತಿ ಪ್ರಮಾಣ ಪತ್ರ ನಮೂನೆ-"ಡಿ"ಯನ್ನು ಹೊಂದಿರತಕ್ಕದ್ದು. ಪರಿವಾರ, ತಳವಾರ, ಮಾಲೇರು, ಕುರುಬ, ಬೆಸ್ತ ಮತ್ತು ಕೋಳಿ ಜಾತಿಗೆ ಸೇರಿದ ಅಭ್ಯರ್ಥಿಗಳು ಪರಿಶಿಷ್ಟ ಪಂಗಡದ ನಾಯಕ, ಮಾಲೇರು, ಕಾಡುಕುರುಬ, ಜೇನುಕುರುಬ, ಗೊಂಡ, ರಾಜಗೊಂಡ, ಕೋಳಿಡೋರ ಮತ್ತು ಟೋಕ್ರಕೋಳಿ ಎಂದು ಜಾತಿ ಪ್ರಮಾಣ ಪತ್ರ ಪಡೆದಿದ್ದಲ್ಲಿ ಅವುಗಳು ಸರ್ಕಾರಿ ಆದೇಶ ಸಂಃಎಸ್‌ಡಬ್ಲೂಡಿ/713/ಎಸ್‌ಎಡಿ/93 ದಿನಾಂಕ 11-03-2002 ರನ್ವಯ ಅಸಿಂಧು ಆಗುತ್ತದೆ. ಆದುದರಿಂದ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ದಿನಾಂಕ 11-03-2002 ರ ನಂತರ ಪಡೆದ ತಮ್ಮ ಜಾತಿ ಮತ್ತು ಉಪಜಾತಿಯನ್ನು ಸ್ಪಷ್ಟವಾಗಿ ನಮೂದಿಸಿರುವ ಸಮರ್ಪಕವಾದ ಜಾತಿ ಪ್ರಮಾಣ ಪತ್ರವನ್ನು ಹೊಂದಿರಬೇಕು. **ಬಿ) ವರ್ಗ-1 ಮೀಸಲಾತಿ** ಸೌಲಭ್ಯ ಕೋರುವ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಜಾತಿ ಪ್ರಮಾಣ ಪತ್ರ ನಮೂನೆ 'ಇ' ಯನ್ನು ಹೊಂದಿರತಕ್ಕದ್ದು. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿರುವ ಚಾಲ್ತಿಯಲ್ಲಿರುವ ಜಾತಿ ಪ್ರಮಾಣ ಪತ್ರವನ್ನು ಹೊಂದಿರಬೇಕು.
(ವಿದ್ಯಾಭ್ಯಾಸಕ್ಕಾಗಿ/ಶಿಕ್ಷಣಕ್ಕಾಗಿ/ಸರ್ಕಾರಿ ಸೌಲಭ್ಯಕ್ಕಾಗಿ ಅಥವಾ ಸಾಲಕ್ಕಾಗಿ ಪಡೆದಿರುವ ಜಾತಿ/ಆದಾಯ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ)

**3. ಗ್ರಾಮೀಣ ಮೀಸಲಾತಿಃ** ಸರ್ಕಾರದಿಂದ ಹೊರಡಿಸಲಾದ ಅಧಿಸೂಚನೆ ಸಂಖ್ಯೆಃ ಸಿಆಸುಇ 96 ಸಸೇನಿ 2005 ದಿನಾಂಕಃ 10/08/2005 ರಲ್ಲಿ ತಿಳಿಸಿರುವಂತೆ 1ನೇ ತರಗತಿಯಿಂದ 10ನೇ ತರಗತಿವರೆಗೆ ಗ್ರಾಮೀಣ ಪ್ರದೇಶದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ನಿಗದಿತ ನಮೂನೆಯಲ್ಲಿ ಸಂಬಂಧಪಟ್ಟ ಶಾಲಾ ಮುಖ್ಯೋಪಾಧ್ಯಾಯರಿಂದ ಪಡೆದ ಪ್ರಮಾಣ ಪತ್ರದ ಮೇಲೆ ವ್ಯಾಪ್ತಿಯ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಮಾಡಿಸಿದ ಪ್ರಮಾಣಪತ್ರ ಹಾಗೂ ಅವಶ್ಯಕವಿರುವ ಕಡೆ ಸಂಬಂಧಪಟ್ಟ ತಹಶೀಲ್ದಾರರವರಿಂದ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದ ಒಳಗಾಗಿ ದೃಢೀಕರಣ ಪತ್ರವನ್ನು ಹೊಂದಿರುವ ಅಭ್ಯರ್ಥಿಗಳು ಮಾತ್ರ ಗ್ರಾಮೀಣ ಮೀಸಲಾತಿಗೆ ಅರ್ಹರಿರುತ್ತಾರೆ. ಸಾಮಾನ್ಯ ವರ್ಗದ ಅಭ್ಯರ್ಥಿಗಳು ಗ್ರಾಮೀಣ ಮೀಸಲಾತಿ ಸೌಲಭ್ಯ ಕೋರಿದಲ್ಲಿ ಮೇಲೆ ತಿಳಿಸಿರುವಂತೆ ಪ್ರಮಾಣ ಪತ್ರ ಸಲ್ಲಿಸುವುದರ ಜೊತೆಗೆ ನಿಗದಿತ ನಮೂನೆ-1 ರಲ್ಲಿ ಸಂಬಂಧಪಟ್ಟ ತಹಶೀಲ್ದಾರರಿಂದ ಅವರು ಕ್ರೀಮಿಲೇಯರ್ (ಮೇಲುಸ್ತರ) ಪರಿಮಿತಿಯಲ್ಲಿ ಬರುವುದಿಲ್ಲವೆಂದು ದೃಢೀಕರಿಸಿದ ಪ್ರಮಾಣ ಪತ್ರ ಹೊಂದಿರಬೇಕು.

**4. ಯೋಜನಾ ನಿರಾಶ್ರಿತ ಮೀಸಲಾತಿಃ** ಸರ್ಕಾರದಿಂದ ಹೊರಡಿಸಲಾದ ಅಧಿಸೂಚನೆ ಸಂಖ್ಯೆಃ ಡಿಪಿಎಆರ್ 23 ಎಸ್‌ಆರ್‌ಆರ್ 99 ದಿನಾಂಕಃ 23-11-2000 ರಲ್ಲಿ ತಿಳಿಸಿರುವಂತೆ ಯೋಜನೆಗಳ ನಿರಾಶ್ರಿತರ ಮೀಸಲಾತಿಗೆ ಅರ್ಹ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಅಧಿಕೃತ ಪ್ರಾಧಿಕಾರದಿಂದ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದ ಒಳಗಾಗಿ ಪಡೆದ ಪ್ರಮಾಣ ಪತ್ರವನ್ನು ಹೊಂದಿದ್ದಲ್ಲಿ ಮಾತ್ರ ಯೋಜನಾ ನಿರಾಶ್ರಿತರ ಮೀಸಲಾತಿಗೆ ಅರ್ಹರಾಗುತ್ತಾರೆ. ಆದರೆ ಸದರಿ ಸರ್ಕಾರದ ಆದೇಶದನುಸಾರ ಈ ನಿಯಮ ಜಾರಿಗೆ ಬಂದ ದಿನಾಂಕದಿಂದ ಹಿಂದಕ್ಕೆ 20 ವರ್ಷಗಳ ಪೂರ್ವದಲ್ಲಿ ಅಥವಾ 20 ವರ್ಷಗಳ ಹಿಂದೆ ಭೂಮಿಯನ್ನು ಸ್ವಾಧೀನ ಪಡಿಸಿಕೊಂಡಂತಹ ಪ್ರಕರಣಗಳ ಅಭ್ಯರ್ಥಿಗಳು ಈ ಮೀಸಲಾತಿ ಸೌಲಭ್ಯಕ್ಕೆ ಅರ್ಹರಿರುವುದಿಲ್ಲ.

**5. ಕನ್ನಡ ಮಾಧ್ಯಮದಲ್ಲಿ ಓದಿದವರಿಗೆ ಮೀಸಲಾತಿ** ಕುರಿತಂತೆ ಸರ್ಕಾರದಿಂದ ಹೊರಡಿಸಲಾದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ / 71 / ಎಸ್‌ಆರ್‌ಆರ್ / 2001 / ಬೆಂಗಳೂರು, ದಿನಾಂಕ ಃ 24-10-2002 ರಲ್ಲಿ ತಿಳಿಸಿರುವಂತೆ 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದ ಒಳಗಾಗಿ ಪಡೆದ ನಿಗದಿತ ಪ್ರಮಾಣ ಪತ್ರ ಅಧಿಕೃತ ಮೊಹರು ಹೊಂದಿದ ಪ್ರಮಾಣ ಪತ್ರ ಹೊಂದಿರುವವರು ಮಾತ್ರ ಕನ್ನಡ ಮಾಧ್ಯಮ ಮೀಸಲಾತಿಗೆ ಅರ್ಹರಿರುತ್ತಾರೆ.

**6. ಮಾಜಿ ಸೈನಿಕ ಮೀಸಲಾತಿಃ** ಅಭ್ಯರ್ಥಿಯು ಜಾಹೀರಾತಿನ ಕ್ರ.ಸಂ.2(ಈ) ರಲ್ಲಿ ತಿಳಿಸಿದಂತೆ ಅರ್ಹತೆ ಹೊಂದಿದ್ದಲ್ಲಿ ಭಾರತದ ಸಶಸ್ತ್ರ ಪಡೆಯಲ್ಲಿ ಸೇವೆ ಸಲ್ಲಿಸಿರುವ ಬಗ್ಗೆ ನಿಗದಿತ ಡಿಸ್‌ಜಾರ್ಜ ಪ್ರಮಾಣ ಪತ್ರ ಹೊಂದಿರಬೇಕು.

**7. ಅಂಗವಿಕಲತೆಯ ಮೀಸಲಾತಿ** ಃ ಅಂಗವಿಕಲತೆಯ ಮೀಸಲಾತಿಯಡಿಯಲ್ಲಿ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಸರ್ಕಾರದ ಆದೇಶ ಸಂಃ ಸಿಆಉಇ/115/ಸೇನೇನೇ/2005 ದಿನಾಂಕಃ 19-05-2005 ರಲ್ಲಿ ನಿರ್ಧಿಷ್ಟಪಡಿಸಿದ ಅಂಗ ವೈಕಲ್ಯತೆಯಲ್ಲಿ ಕನಿಷ್ಟ ಶೇ. 40 ಮತ್ತು ಅದಕ್ಕಿಂತ ಹೆಚ್ಚಿನ ಅಂಗ ವೈಕಲ್ಯತೆ ಹೊಂದಿರುವ ಕುರಿತು ಅಧಿಕೃತ ಪ್ರಾಧಿಕಾರಿಗಳಿಂದ ಅಂಗವಿಕಲತೆಯನ್ನು ನಿರ್ಧಿಷ್ಟಪಡಿಸಿ "ಉದ್ಯೋಗಕ್ಕಾಗಿ" ನೀಡಲಾಗುವ ಸಮರ್ಪಕ ಪ್ರಮಾಣ ಪತ್ರವನ್ನು ಹೊಂದಿರಬೇಕು.

**ಸಾರಿಗೆ ಸಂಸ್ಥೆಯ ಇಲಾಖಾ ಅಭ್ಯರ್ಥಿಗಳಿಗಾಗಿ :** ಮೇಲಿನ ಹುದ್ದೆಗಳಿಗೆ ಅರ್ಜಿ ಸಲ್ಲಿಸಬಯಸುವ ಇಲಾಖಾ ಅಭ್ಯರ್ಥಿಗಳು ವಯೋಮಿತಿ ವಿನಾಯಿತಿಯನ್ನು ಹೊರತುಪಡಿಸಿ ಉಳಿದೆಲ್ಲಾ ಷರತ್ತುಗಳ ವಿಷಯದಲ್ಲಿ ಇತರೆ ಅಭ್ಯರ್ಥಿಗಳೊಂದಿಗೆ ಸ್ಪರ್ಧಿಸಬೇಕಿರುತ್ತದೆ.

## IV. ನಿಗಧಿತ ಶುಲ್ಕ

1. ಶುಲ್ಕದ ವಿವರ :

| ವರ್ಗ | ಶುಲ್ಕ(ಪ್ರತಿ ಹುದ್ದೆಗೆ) |
|---|---|
| ಸಾಮಾನ್ಯ, 2ಎ, 2ಬಿ, 3ಎ ಮತ್ತು 3ಬಿ ವರ್ಗ | 400/- |
| ಪ.ಜಾತಿ, ಪ.ಪಂಗಡ, ವರ್ಗ-1, ಮಾಜಿ ಸೈನಿಕ ಮತ್ತು ಅಶಕ್ತ ಮಾಜಿ ಸೈನಿಕರ ಅವಲಂಬಿತರಿಗೆ | 200/- |

**ವಿಶೇಷ ಸೂಚನೆ** : ಒಂದಕ್ಕಿಂತ ಹೆಚ್ಚು ಹುದ್ದೆಗೆ ಅರ್ಜಿ ಸಲ್ಲಿಸಬಯಸುವ ಅಭ್ಯರ್ಥಿಗಳು ಪ್ರತಿ ಹುದ್ದೆಗೆ ಮೇಲ್ಕಾಣಿಸಿದಂತೆ ನಿಗದಿಪಡಿಸಿರುವ ಮೊತ್ತವನ್ನು ಒಗ್ಗೂಡಿಸಿ ಎಲ್ಲಾ ಹುದ್ದೆಗಳಿಗೂ ಸೇರಿದಂತೆ ಒಟ್ಟು ಹಣದ ಮೊತ್ತವನ್ನು ಒಂದೇ ಚಲನ್‌ನಲ್ಲಿ ಪಾವತಿ ಮಾಡಬೇಕು(ಉದಾಹರಣೆಗೆ : ಒಬ್ಬ ಸಾಮಾನ್ಯ ವರ್ಗದ ಅಭ್ಯರ್ಥಿ ಒಂದೇ ಅರ್ಜಿಯಲ್ಲಿ ಮೂರು ಹುದ್ದೆಗಳನ್ನು ಅಯ್ಕೆ ಮಾಡಿದಲ್ಲಿ ರೂ. 1200/- ಗಳ ಮೊತ್ತವನ್ನು ಚೆಲನ್‌ನಲ್ಲಿ ನಮೂದಿಸತಕ್ಕದ್ದು).

2. ಶುಲ್ಕ ಪಾವತಿ ಮಾಡುವ ರೀತಿ ಹಾಗೂ ಬ್ಯಾಂಕಿನ ವಿವರ :

www.ksrtcjobs.com ನಲ್ಲಿ ON LINE ಮೂಲಕ ಅರ್ಜಿ ಸಲ್ಲಿಸಿದ ಕೂಡಲೆ ಅಭ್ಯರ್ಥಿಗಳು ನಂತರ ಚಲನ್ ಪ್ರತಿಯನ್ನು ಡೌನ್‌ಲೋಡ್ ಮಾಡಿ ಅರ್ಜಿ ಶುಲ್ಕವನ್ನು ಪ್ರಧಾನ ಅಂಚೆ ಕಚೇರಿಯ ಕೆಲಸದ ವೇಳೆಯೊಳಗೆ ಯಾವುದೇ ಎಲೆಕ್ಟ್ರಾನಿಕ್ ಅಂಚೆ ಕಚೇರಿಯಲ್ಲಿ (Computerised Post Offices only) ಮಾತ್ರ ಇ-ಪೇಮೆಂಟ್ ಮೂಲಕ ಸಂದಾಯ ಮಾಡಬಹುದಾಗಿರುತ್ತದೆ. ಶುಲ್ಕವನ್ನು ಪಾವತಿಸಿದೇ ಇರುವ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಅಂಚೆ ಕಚೇರಿಯಲ್ಲಿ ಪಾವತಿಸಿದ ಮೂಲ ಚಲನ್ ಪ್ರತಿಯನ್ನು ಲಿಖಿತ ಪರೀಕ್ಷೆ ಹಾಗೂ ದಾಖಲಾತಿ ಪರಿಶೀಲನಾ ಸಮಯದಲ್ಲಿ ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು.

ಅ. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂತಿರುಗಿಸಲಾಗುವುದಿಲ್ಲ ಅಥವಾ ಅದನ್ನು ಸಂಸ್ಥೆಯು ನಡೆಸುವ ಇತರೆ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ಶುಲ್ಕವನ್ನು ಸಂದಾಯ ಮಾಡದಿದ್ದಲ್ಲಿ ಅವರ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

| |
|---|
| **ವಿಶೇಷ ಸೂಚನೆ : ಅರ್ಜಿ ಶುಲ್ಕವನ್ನು ಪಾವತಿಸದಿರುವುದು ಅಥವಾ ಕಡಿಮೆ ಮೊತ್ತದ ಅರ್ಜಿ ಶುಲ್ಕವನ್ನು ಪಾವತಿಸಿರುವುದು ಯಾವುದೇ ಸಂದರ್ಭದಲ್ಲಿ ಕಂಡು ಬಂದರೂ ಸಹ ಅಂತಹ ಅಭ್ಯರ್ಥಿಗಳ ಅಭ್ಯರ್ಥತನವನ್ನು ತಿರಸ್ಕರಿಸಲಾಗುವುದು** |

## V. ಅರ್ಜಿಯನ್ನು ಸಲ್ಲಿಸುವ ವಿಧಾನ ಮತ್ತು ಕೊನೆಯ ದಿನಾಂಕ

ಅ. ಅರ್ಜಿಯನ್ನು ಕಡ್ಡಾಯವಾಗಿ ಆನ್ ಲೈನ್ ಮುಖಾಂತರವೇ ಕ ರಾ ರ ಸಾ ನಿಗಮದ ವೆಬ್ ಸೈಟ್ www.ksrtcjobs.com ಮೂಲಕ ಸಲ್ಲಿಸಬೇಕು.

ಆ. ದಿನಾಂಕ 14.01.2016 ರಿಂದ 04.02.2016 ರವರಗೆ ವೆಬ್ ಸೈಟ್ ತೆರೆದಿರುತ್ತದೆ. ಅರ್ಜಿಗಳನ್ನು ಕೊನೆಯ ದಿನಾಂಕವಾದ 04.02.2016 ರ ಸಂಜೆ 17:30 ಗಂಟೆಯೊಳಗೆ ಆನ್ ಲೈನ್‌ನಲ್ಲಿ ಸಲ್ಲಿಸಬಹುದಾಗಿರುತ್ತದೆ. ಅರ್ಜಿ ಶುಲ್ಕವನ್ನು ದಿನಾಂಕ 06.02.2016 ರ ಒಳಗಾಗಿ ಅಂಚೆ ಕಚೇರಿಯ ಕೆಲಸದ ವೇಳೆಯಲ್ಲಿ ಪಾವತಿಸುವುದು.

ಇ. ಮೇಲ್ಕಂಡ ನಿಗದಿತ / ಕೊನೆಯ ದಿನಾಂಕ ಮತ್ತು ಸಮಯದ ನಂತರ ಬರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಈ ಅಭ್ಯರ್ಥಿಗಳು ಕೇವಲ ಒಂದು ಅರ್ಜಿಯನ್ನು ಮಾತ್ರ ಸಲ್ಲಿಸಬಹುದಾಗಿದ್ದು ಒಮ್ಮೆ ಸಲ್ಲಿಸಿದ ಅರ್ಜಿಯನ್ನು ಯಾವುದೇ ಕಾರಣದಿಂದಲೂ ತಿದ್ದುಪಡಿ ಮಾಡಲು ಅವಕಾಶ ಇರುವುದಿಲ್ಲ. ಆದ್ದರಿಂದ ಅಭ್ಯರ್ಥಿಗಳು ಸೂಚನೆಗಳನ್ನು ಓದಿ, ಅರ್ಥ ಮಾಡಿಕೊಂಡ ನಂತರ ಅರ್ಜಿಯನ್ನು ತುಂಬಿ ಸಲ್ಲಿಸತಕ್ಕದ್ದು.

ಉ. ಕುಶಲಕರ್ಮಿ ಹುದ್ದೆಯಲ್ಲಿ ಒಂದಕ್ಕಿಂತ ಹೆಚ್ಚು ವೃತ್ತಿ ಗಳಿಗೆ ಅರ್ಜಿ ಸಲ್ಲಿಸಲು ಬಯಸಿದಲ್ಲಿ, ಒಂದೇ ಅರ್ಜಿಯಲ್ಲಿ ಅರ್ಜಿ ಸಲ್ಲಿಸಲು ಬಯಸುವ ಎಲ್ಲಾ ವೃತ್ತಿಗಳನ್ನು ನಮೂದಿಸಿ ವೃತ್ತಿಗಳ ಆದ್ಯತೆಯನ್ನು ತಪ್ಪದೆ ನಮೂದಿಸತಕ್ಕದ್ದು.

ಊ. ಅಭ್ಯರ್ಥಿಗಳು ಸೂಚನೆಗಳನ್ನು ಓದಿ ಅರ್ಥಮಾಡಿಕೊಂಡ ನಂತರ ಅರ್ಜಿಯನ್ನು ಆನ್‌ಲೈನ್‌ನಲ್ಲಿ ಭರ್ತಿ ಮಾಡಿ ಭಾವಚಿತ್ರ ಹಾಗೂ ಸಹಿಯನ್ನು ಅರ್ಜಿಯೊಂದಿಗೆ ಅಪ್‌ಲೋಡ್ ಮಾಡಿ ಸಲ್ಲಿಸತಕ್ಕದ್ದು. ಅಪ್‌ಲೋಡ್ ಮಾಡಿ ಸಲ್ಲಿಸಿದ ಮುದ್ರಿತ ಅರ್ಜಿ ಹಾಗೂ ಅರ್ಜಿ ಶುಲ್ಕ ಪಾವತಿಯ ಅಂಚೆ ಕಚೇರಿ ಚಲನ್ ಪ್ರತಿಗಳನ್ನು ಅಭ್ಯರ್ಥಿಗಳು ತಮ್ಮ ಬಳಿ ಇಟ್ಟುಕೊಂಡು CAT ಪರೀಕ್ಷೆ ಹಾಗೂ ಮೂಲ ದಾಖಲಾತಿಗಳ ಪರಿಶೀಲನಾ ಸಮಯದಲ್ಲಿ ಕಡ್ಡಾಯವಾಗಿ ಹಾಜರಿಪಡಿಸುವುದು.

## VI. ಸಾಮಾನ್ಯ ಸಾಮರ್ಥ್ಯ ಪರೀಕ್ಷೆ :

- ಅರ್ಜಿ ಸಲ್ಲಿಸಿದ ಎಲ್ಲಾ ಅಭ್ಯರ್ಥಿಗಳು ಸಾಮಾನ್ಯ ಸಾಮರ್ಥ್ಯ ಪರೀಕ್ಷೆಗೆ ಹಾಜರಾಗಬೇಕಾಗುತ್ತದೆ.
- ಸಾಮಾನ್ಯ ಸಾಮರ್ಥ್ಯ ಪರೀಕ್ಷೆಯು ಸಂವಹನ ನೈಪುಣ್ಯತೆ / ವಿಶ್ಲೇಷಣೆ / ಗಣಿತ / ಸಾಮಾನ್ಯ ಜ್ಞಾನ / ಗಣಕಯಂತ್ರ ಜ್ಞಾನಗಳ ಜೊತೆಗೆ ನಿಗದಿತ ವಿದ್ಯಾರ್ಹತೆ ಮತ್ತು ವೃತ್ತಿಗೆ ಸಂಬಂಧಿಸಿದ ವಿಷಯಗಳನ್ನು ಹೊಂದಿರುತ್ತದೆ.
- ಸಾಮಾನ್ಯ ಸಾಮರ್ಥ್ಯ ಪರೀಕ್ಷೆಯನ್ನು ಬೆಂಗಳೂರು / ಮಂಗಳೂರು / ಮೈಸೂರು ಮತ್ತು ದಾವಣಗೆರೆ ಕೇಂದ್ರಗಳಲ್ಲಿ ನಡೆಸಲಾಗುವುದು. ಅಭ್ಯರ್ಥಿಗಳ ಲಭ್ಯತೆಯ ಆಧಾರದ ಮೇಲೆ ಅವಶ್ಯಕತೆಗನುಗುಣವಾಗಿ ಪರೀಕ್ಷಾ ಕೇಂದ್ರಗಳನ್ನು ಬದಲಾವಣೆ ಮಾಡಬಹುದಾಗಿರುತ್ತದೆ.
- ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಸಮಯದಲ್ಲಿ ಸಾಮಾನ್ಯ ಸಾಮರ್ಥ್ಯ ಪರೀಕ್ಷೆಯ ಕೇಂದ್ರವನ್ನು ಆಯ್ಕೆ ಮಾಡಿಕೊಳ್ಳಬೇಕಾಗುತ್ತದೆ. ಅಭ್ಯರ್ಥಿಯು ಒಮ್ಮೆ ಆಯ್ಕೆ ಮಾಡಿಕೊಂಡ ಸಾಮಾನ್ಯ ಸಾಮರ್ಥ್ಯ ಪರೀಕ್ಷಾ ಕೇಂದ್ರವನ್ನು ನಂತರ ಯಾವುದೇ ಕಾರಣಕ್ಕೂ ಬದಲಾಯಿಸಲಾಗುವುದಿಲ್ಲ.
- ಕುಶಲಕರ್ಮಿ ಹುದ್ದೆಗೆ ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚಿನ ವೃತ್ತಿಗಳಿಗೆ ಅರ್ಜಿ ಸಲ್ಲಿಸಿದಲ್ಲಿ ಒಂದೇ ಸಾಮಾನ್ಯ ಸಾಮರ್ಥ್ಯ ಪರೀಕ್ಷೆಗೆ ಹಾಜರಾಗಬೇಕಾಗುತ್ತದೆ. ಈ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳನ್ನೆ ಪ್ರತಿ ವೃತ್ತಿಯ ಆಯ್ಕೆಗೆ ಪರಿಗಣಿಸಲಾಗುವುದು.
- ಅಭ್ಯರ್ಥಿಗಳು ತಾಂತ್ರಿಕ ಸಹಾಯಕ / ಕುಶಲಕರ್ಮಿ ಎರಡೂ ಹುದ್ದೆಗಳಿಗೆ ಅರ್ಜಿ ಸಲ್ಲಿಸಿದಲ್ಲಿ ಪ್ರತಿ ಹುದ್ದೆಗೆ ಪ್ರತ್ಯೇಕವಾಗಿ ಸಾಮಾನ್ಯ ಸಾಮರ್ಥ್ಯ ಪರೀಕ್ಷೆಯನ್ನು ನಡೆಸಲಾಗುವುದು. ಆದ್ದರಿಂದ ಒಂದೇ ಪರೀಕ್ಷಾ ಕೇಂದ್ರವನ್ನು ಆಯ್ಕೆ ಮಾಡುವುದು. ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಸಲ್ಲಿಸಿರುವ ಬಗ್ಗೆ ವಿವರಗಳನ್ನು ನೀಡದೇ ಪರೀಕ್ಷಾ ಕೇಂದ್ರಗಳು ಬೇರೆ ಬೇರೆಯಾಗಿ ನಿಗದಿಯಾದಲ್ಲಿ ಇದಕ್ಕೆ ಸಂಸ್ಥೆಯು ಜವಾಬ್ದಾರಿಯಾಗುವುದಿಲ್ಲ.
- ಅಭ್ಯರ್ಥಿಗಳು ಸಾಮಾನ್ಯ ಸಾಮರ್ಥ್ಯ ಪರೀಕ್ಷೆ ಬರೆಯಲು ಆಯ್ಕೆ ಮಾಡಿಕೊಂಡ ಪರೀಕ್ಷಾ ಕೇಂದ್ರದಲ್ಲಿ ಅನಿವಾರ್ಯ ಕಾರಣಗಳಿಂದ ಪರೀಕ್ಷೆಯನ್ನು ನಡೆಸಲು ಸಾಧ್ಯವಾಗದಿದ್ದಲ್ಲಿ ಸಂಸ್ಥೆಯು ಸೂಚಿಸುವ ಪರೀಕ್ಷಾ ಕೇಂದ್ರದಲ್ಲಿಯೇ ಪರೀಕ್ಷೆಯನ್ನು ಬರೆಯಬೇಕಾಗುತ್ತದೆ.
- ಸಾಮಾನ್ಯ ಸಾಮರ್ಥ್ಯ ಪರೀಕ್ಷೆಗೆ ಹಾಜರಾಗುವ ಸಂದರ್ಭದಲ್ಲಿ ಅರ್ಜಿ ಶುಲ್ಕವನ್ನು ಪಾವತಿಸಿರುವ ಅಂಚೆ ಇಲಾಖೆಯಿಂದ ನೀಡುವ ಚಲನನ್ನು ಹಾಜರುಪಡಿಸದಿದ್ದಲ್ಲಿ ಅಂತಹ ಅಭ್ಯರ್ಥಿಯನ್ನು ಸಾಮಾನ್ಯ ಸಾಮರ್ಥ್ಯ ಪರೀಕ್ಷೆಗೆ ಹಾಜರಾಗಲು ಅವಕಾಶ ನೀಡಲಾಗುವುದಿಲ್ಲ.

## VII. ಆಯ್ಕೆ ವಿಧಾನ

- ಅಭ್ಯರ್ಥಿಗಳು ಸಾಮಾನ್ಯ ಸಾಮರ್ಥ್ಯ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಶೇ. 75 ಅಂಕಗಳು ಮತ್ತು ನಿಗದಿತ ವಿದ್ಯಾರ್ಹತೆಯಲ್ಲಿ ಗಳಿಸಿರುವ ಅಂಕಗಳ ಶೇ. 25 ಅಂಕಗಳನ್ನು ಸೇರಿಸಿ ಅರ್ಹತೆಯ ಆಧಾರದ ಮೇಲೆ (Merit) ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಗಳನುಸಾರ 1:5 ರ ಅನುಪಾತದಲ್ಲಿ ದೈಹಿಕ ಅರ್ಹತೆ ಮತ್ತು ಮೂಲ ದಾಖಲೆಗಳ ಪರಿಶೀಲನೆಗೆ ಕರೆಯಲಾಗುವುದು.
- ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ನೀಡಿದ ಮಾಹಿತಿಗಳ ಆಧಾರದ ಮೇಲೆ ಮೂಲ ದಾಖಲಾತಿಗಳ ಮತ್ತು ದೈಹಿಕ ಅರ್ಹತೆಯ ಪರಿಶೀಲನೆಗೆ ಕರೆಯಲಾಗುವುದು. ಅರ್ಜಿಯಲ್ಲಿ ನೀಡಿದ ಮಾಹಿತಿಯು ತಪ್ಪು ಎಂದು ಕಂಡು ಬಂದಲ್ಲಿ ಇಂತಹ ಅಭ್ಯರ್ಥಿಗಳ ಅರ್ಜಿಯನ್ನು ತಿರಸ್ಕರಿಸಲಾಗುವುದು.

- ದೈಹಿಕ ಅರ್ಹತೆ ಮತ್ತು ಮೂಲ ದಾಖಲೆ ಪರಿಶೀಲನೆಯಲ್ಲಿ ಅರ್ಹರಾದ ಅಭ್ಯರ್ಥಿಗಳನ್ನು ಅರ್ಹತೆಯ (Merit) ಆಧಾರದ ಮೇಲೆ ಮತ್ತು ಜಾರಿಯಲ್ಲಿರುವ ಮೀಸಲಾತಿಯನುಸಾರ ಆಯ್ಕೆ ಮಾಡಲಾಗುವುದು.

ಸಂಸ್ಥೆಯ ವೆಬ್‌ಸೈಟ್ www.ksrtcjobs.com ಮತ್ತು ಸಂಸ್ಥೆಯ ಸೂಚನಾ ಫಲಕದಲ್ಲಿ ಹಾಗೂ ಪ್ರಮುಖ ದಿನಪತ್ರಿಕೆಗಳಲ್ಲಿ ಸಾಮಾನ್ಯ ಸಾಮರ್ಥ್ಯ ಪರೀಕ್ಷೆಯ ದಿನಾಂಕ ಮತ್ತು ಕರೆಪತ್ರ ಮುದ್ರಿಸಿಕೊಳ್ಳುವ ಕುರಿತು ವಿವರಗಳನ್ನು ಪ್ರಕಟಿಸಲಾಗುವುದು. ಅಭ್ಯರ್ಥಿಗಳು ಕರೆಪತ್ರವನ್ನು ವೆಬ್‌ಸೈಟ್‌ನಿಂದ ಮುದ್ರಿಸಿಕೊಂಡು ಇದರಲ್ಲಿ ತಿಳಿಸಲಾಗುವ ನಿರ್ದೇಶನಗಳನ್ನು ಪಾಲಿಸತಕ್ಕದ್ದು ಮತ್ತು ನಿಗದಿತ ದಿನಾಂಕ ಹಾಗೂ ಸಮಯದಂದು ಸಾಮಾನ್ಯ ಸಾಮರ್ಥ್ಯ ಪರೀಕ್ಷೆಗೆ ಹಾಜರಾಗತಕ್ಕದ್ದು.

ಅಭ್ಯರ್ಥಿಗಳಿಗೆ ಸಾಮಾನ್ಯ ಸಾಮರ್ಥ್ಯ ಪರೀಕ್ಷೆಗೆ ಮತ್ತು ಮೂಲ ದಾಖಲೆಗಳ ಮತ್ತು ದೇಹದಾರ್ಢ್ಯತೆ ಪರಿಶೀಲನೆಗೆ ಅಂಚೆ ಮೂಲಕ ಪ್ರತ್ಯೇಕ ಕರೆಪತ್ರಗಳನ್ನು ಕಳುಹಿಸಲಾಗುವುದಿಲ್ಲ.

**ಕನ್ನಡ ಭಾಷಾಜ್ಞಾನ:** ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ವಿದ್ಯಾರ್ಹತೆಯಲ್ಲಿ ಕನ್ನಡ ಭಾಷೆಯನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯನ್ನಾಗಿ ವ್ಯಾಸಂಗ ಮಾಡದಿದ್ದಲ್ಲಿ ಸಂಸ್ಥೆಯಲ್ಲಿ ಜಾರಿಯಲ್ಲಿರುವ ನಿಯಮಾವಳಿಯಂತೆ ನಡೆಸುವ ಕನ್ನಡ ಭಾಷಾ ಪರೀಕ್ಷೆಯಲ್ಲಿ ಒಂದೇ ಅವಕಾಶದಲ್ಲಿ ಉತ್ತೀರ್ಣರಾಗಬೇಕು. ಕನ್ನಡ ಭಾಷಾ ಪರೀಕ್ಷೆಯಲ್ಲಿ ಅನುತ್ತೀರ್ಣರಾದ ಪಕ್ಷದಲ್ಲಿ ಅವರು ಆಯ್ಕೆಗೆ ಅರ್ಹತೆಯನ್ನು ಕಳೆದುಕೊಳ್ಳುತ್ತಾರೆ.

## VIII. ತರಬೇತಿ ಅವಧಿ, ಭತ್ಯೆ ಹಾಗೂ ವೇತನ ಶ್ರೇಣಿ

ಅ) ಆಯ್ಕೆಗೊಂಡ ಅಭ್ಯರ್ಥಿಗಳನ್ನು ಎರಡು ವರ್ಷಗಳ ಕಾಲ ಕೆಲಸದ ಮೇಲೆ ತರಬೇತಿಗೆ ನಿಯೋಜಿಸಲಾಗುವುದು. ತರಬೇತಿಯ ಅವಧಿಯಲ್ಲಿ, ಈ ಕೆಳಕಾಣಿಸಿದಂತೆ ಮಾಸಿಕ ತರಬೇತಿ ಭತ್ಯೆ ನೀಡಲಾಗುವುದು.

| ಹುದ್ದೆ | ತರಭೇತಿ ಭತ್ಯೆ |
|---|---|
| ಕುಶಲಕರ್ಮಿ | ರೂ.9,750 /- |
| ತಾಂತ್ರಿಕ ಸಹಾಯಕ | ರೂ.9,100/- |

ಆ) ಹುದ್ದೆಗೆ ನಿಗದಿಪಡಿಸುವ ಇತರೆ ಭತ್ಯೆಗಳು (ತರಬೇತಿ ಅವಧಿ ಮುಗಿದ ನಂತರ)

ಇ) ವೇತನ ಶ್ರೇಣಿ : ಆಯ್ಕೆಗೊಂಡ ಅಭ್ಯರ್ಥಿಗಳು ಎರಡು ವರ್ಷಗಳ ಕಾಲ ಕೆಲಸದ ಮೇಲೆ ತರಬೇತಿ ಅವಧಿಯನ್ನು ತೃಪ್ತಿಕರವಾಗಿ ಪೂರೈಸಿದಲ್ಲಿ ಅವರನ್ನು ಖಾಯಂ ಪೂರ್ವ ಪರೀಕ್ಷಾರ್ಥ ಸೇವೆಯಲ್ಲಿ ನೇಮಕಗೊಳಿಸಿ ಈ ಕೆಳಕಾಣಿಸಿದಂತೆ ಕಾಲಿಕ ವೇತನ ಶ್ರೇಣಿಯನ್ನು ನಿಗಧಿಪಡಿಸಲಾಗುವುದು.

| **ಹುದ್ದೆಯ ಹೆಸರು** | **ವೇತನ ಶ್ರೇಣಿ** |
|---|---|
| 1. ಕುಶಲಕರ್ಮಿ, ದರ್ಜೆ-3 | 12410-250-12910-320-14190-420-15030-530-16620-640-19180 |
| 2. ತಾಂತ್ರಿಕ ಸಹಾಯಕ ದರ್ಜೆ-3 | 10340-140-10620-170-11300-250-12800-320-14400 |

## IX. ದಾಖಲಾತಿಗಳ ವಿವರ

ಅಭ್ಯರ್ಥಿಗಳು ಅರ್ಜಿಯಲ್ಲಿ ನಮೂದಿಸಿರುವ ಅರ್ಹತೆ ಹಾಗೂ ಮೀಸಲಾತಿಗಳಿಗೆ ಅನುಗುಣವಾಗಿ ಈ ಕೆಳಕಂಡ ಮೂಲ ದಾಖಲಾತಿಗಳ ಪ್ರಮಾಣಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಲಾಗಿರುವ ಕೊನೆಯ ದಿನಾಂಕವಾದ 04.02.2016 ರಂದಿಗೆ ಹೊಂದಿರಬೇಕು ಹಾಗೂ ಸಂಸ್ಥೆಯು ಅವುಗಳನ್ನು ಹಾಜರುಪಡಿಸಲು ಸೂಚಿಸಿದಾಗ ತಪ್ಪದೆ ಹಾಜರು ಪಡಿಸತಕ್ಕದ್ದು.

1. ಅರ್ಜಿ ಶುಲ್ಕ ಪಾವತಿ ಮಾಡಿರುವ ಬಗ್ಗೆ ಅಂಚೆ ಕಚೇರಿಯಿಂದ ನೀಡುವ ಚಲನ್‌ನ ಮೂಲ ಪ್ರತಿ.
2. ಆಯಾ ಹುದ್ದೆಗೆ ನಿಗಧಿಪಡಿಸಿರುವ ವಿದ್ಯಾರ್ಹತೆಯಲ್ಲಿ ಉತ್ತೀರ್ಣರಾಗಿರುವ ಬಗ್ಗೆ ಅಂಕಪಟ್ಟಿಗಳು ಮತ್ತು ಪ್ರಮಾಣ ಪತ್ರಗಳು.
3. ಜನ್ಮ ದಿನಾಂಕದ ದಾಖಲೆಗಾಗಿ ಜನ್ಮ ದಿನಾಂಕವುಳ್ಳ ಎಸ್ ಎಸ್ ಎಲ್ ಸಿ ಅಂಕಪಟ್ಟಿ /ಶಾಲಾ ವರ್ಗಾವಣಾ ಪತ್ರ/ಕ್ಯುಮಿಲೇಟೀವ್ ರೆಕಾರ್ಡ್.

4. ಸೈನಿಕ ಸೇವೆಯಿಂದ ಬಿಡುಗಡೆಯಾಗಿ / ಮುಕ್ತಿ ಹೊಂದಿ ಮಾಜಿ ಸೈನಿಕ ಎಂಬುದಾಗಿ ನಿರ್ಧರಿಸಿರುವ ಬಗ್ಗೆ ಪ್ರಮಾಣಪತ್ರ.(ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ).
5. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, 2ಎ, 2ಬಿ, 3ಎ, ಹಾಗೂ 3ಬಿ ವರ್ಗಗಳ ಮೀಸಲಾತಿಯ ಚಾಲ್ತಿಯಲ್ಲಿರುವ ಪ್ರಮಾಣ ಪತ್ರಗಳು. (ಜಾತಿ/ವರ್ಗಗಳ ಮೀಸಲಾತಿ ಕೋರಿದ್ದಲ್ಲಿ).
6. ನಮೂನೆ-1 ಮತ್ತು ನಮೂನೆ-2 ರಲ್ಲಿ ಪಡೆದ ಗ್ರಾಮೀಣ ಅಭ್ಯರ್ಥಿ ಮೀಸಲಾತಿ ಪ್ರಮಾಣ ಪತ್ರ ಪ್ರತಿಗಳು(ಗ್ರಾಮೀಣ ಮೀಸಲಾತಿ ಕೋರಿದ್ದಲ್ಲಿ).
7. ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಪ್ರಮಾಣ ಪತ್ರ. (ಕನ್ನಡ ಮಾಧ್ಯಮ ಮೀಸಲಾತಿ ಕೋರಿದ್ದಲ್ಲಿ).
8. ಯೋಜನಾ ನಿರಾಶ್ರಿತ ಮೀಸಲಾತಿಗಾಗಿ ಅಧಿಕೃತ ಪ್ರಾಧಿಕಾರಸ್ಥರಿಂದ ಪಡೆದ ಸಮರ್ಪಕವಾದ ಪ್ರಮಾಣ ಪತ್ರ ಹೊಂದಿರಬೇಕು.
9. ಅಂಗವಿಕಲ ಮೀಸಲಾತಿ ಕೋರಿರುವ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಅಧಿಕೃತ ಪ್ರಾಧಿಕಾರಸ್ಥರಿಂದ ಪಡೆದ ಸಮರ್ಪಕ ಪ್ರಮಾಣ ಪತ್ರ ಹೊಂದಿರಬೇಕು.
10. ಇಲಾಖಾ ಅಭ್ಯರ್ಥಿಗಳು ಸಂಬಂದಪಟ್ಟ ನೇಮಕ ಪ್ರಾಧಿಕಾರಸ್ಥರಿಂದ ಪಡೆದ ಸೇವಾ ಪ್ರಮಾಣ ಪತ್ರ (ಇಲಾಖಾ ಅಭ್ಯರ್ಥಿಯಾಗಿದ್ದಲ್ಲಿ).
11. ಅಶಕ್ತ ಮಾಜಿ ಸೈನಿಕರ ಅವಲಂಬಿತರೆಂದು ಅರ್ಜಿ ಶುಲ್ಕದಲ್ಲಿ ರಿಯಾಯತಿ ಪಡೆದಿದ್ದಲ್ಲಿ ಈ ಬಗ್ಗೆ ಪ್ರಮಾಣ ಪತ್ರ.

## X. ಸೂಚನೆಗಳು

- ಒಬ್ಬ ಅಭ್ಯರ್ಥಿಯು ಒಂದು ಅರ್ಜಿಯನ್ನು ಮಾತ್ರ ಸಲ್ಲಿಸಲು ಅವಕಾಶವಿರುತ್ತದೆ.
- ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಸಲ್ಲಿಸಬಯಸುವ ಅಭ್ಯರ್ಥಿಗಳು ಒಂದೇ ಅರ್ಜಿಯಲ್ಲಿ ಎಲ್ಲಾ ಹುದ್ದೆಗಳನ್ನು ನಮೂದಿಸಿ ತಪ್ಪದೆ ಆದ್ಯತೆಗಳನ್ನು ನೀಡುವುದು.
- ಅರ್ಜಿ ಸಲ್ಲಿಸಿರುವ ಎಲ್ಲಾ ಹುದ್ದೆಗಳಿಗೆ ಒಂದೇ ಸಾಮಾನ್ಯ ಸಾಮರ್ಥ್ಯ ಪರೀಕ್ಷೆಯನ್ನು ನಡೆಸಿ ಅದರಲ್ಲಿ ಗಳಿಸಿದ ಅಂಕಗಳನ್ನೇ ಎಲ್ಲಾ ಹುದ್ದೆಗಳ ಆಯ್ಕೆಗೆ ಪರಿಗಣಿಸಲಾಗುವುದು.
- ಉದ್ಯೋಗ ವಿನಿಮಯ ಕೇಂದ್ರದಲ್ಲಿ ಹೆಸರನ್ನು ನೊಂದಾಯಿಸಿದ ಅರ್ಹ ಅಭ್ಯರ್ಥಿಗಳೂ ಸಹ ಈ ಜಾಹೀರಾತಿನ ಅನುಸಾರ ಅರ್ಜಿ ಸಲ್ಲಿಸಬಹುದಾಗಿದೆ.
- ಆಯಾ ಹುದ್ದೆಗಳಿಗೆ ನಿಗದಿಪಡಿಸಿದ ವಿದ್ಯಾರ್ಹತೆಯನ್ನು ಮಾತ್ರ ಪರಿಗಣಿಸಲಾಗುವುದು. ಹೆಚ್ಚಿನ ವಿದ್ಯಾರ್ಹತೆಗೆ ಯಾವುದೇ ಆದ್ಯತೆ ನೀಡಲಾಗುವುದಿಲ್ಲ.
- ಭಾರತೀಯರಲ್ಲದ ಅಭ್ಯರ್ಥಿ / ಕಾನೂನು ಬಾಹಿರವಾಗಿ ಒಂದಕ್ಕಿಂತ ಹೆಚ್ಚು ಜೀವಂತ ಪತಿ/ಪತ್ನಿ ಹೊಂದಿರುವ ಅಭ್ಯರ್ಥಿ ಹಾಗೂ ನೈತಿಕ ದುರ್ನಡತೆಯಿಂದಾಗಿ / ನೀತಿಬಾಹಿರ ಚಟುವಟಿಕೆಗಳಿಂದಾಗಿ ನ್ಯಾಯಾಲಯದಿಂದ ಶಿಕ್ಷೆಗೊಳಪಟ್ಟಿರುವ ವ್ಯಕ್ತಿ ಅಥವಾ ಈ ಸಂಸ್ಥೆಯಲ್ಲಿ ಅಥವಾ ರಾಜ್ಯ/ಕೇಂದ್ರ/ಸ್ಥಳೀಯ ಸಂಸ್ಥೆ/ಕೈಗಾರಿಕಾ/ವಾಣಿಜ್ಯಕ್ಕೆ ಸಂಬಂದಪಟ್ಟ ಅಥವಾ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗಳ ಅಧೀನದಲ್ಲಿರುವ ಕಛೇರಿಗಳಲ್ಲಿ ನೈತಿಕ ದುರ್ನಡತೆಯಿಂದಾಗಿ / ನೀತಿಬಾಹಿರ ಚಟುವಟಿಕೆಗಳಲ್ಲಿ ಭಾಗಿಯಾದ ಕಾರಣಕ್ಕಾಗಿ ಅಥವಾ ಆಯ್ಕೆಯಾದ ಅಭ್ಯರ್ಥಿಯು ಬದಲಿಯಾಗಿ / ತರಬೇತಿದಾರರಾಗಿ ಕಾರ್ಯ ನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಕಾನೂನು ಬಾಹಿರ/ನೀತಿ ಬಾಹಿರ ಚಟುವಟಿಕೆಗಳಲ್ಲಿ ತೊಡಗಿ ಸೇವೆಯಿಂದ ತೆಗೆದು ಹಾಕಿದ್ದಲ್ಲಿ/ವಜಾ ಮಾಡಿದ್ದಲ್ಲಿ ನೇಮಕಾತಿಗೆ ಅನರ್ಹರಾಗುತ್ತಾರೆ.
- ಅರ್ಜಿಯಲ್ಲಿ ಸುಳ್ಳು ಮಾಹಿತಿ ನೀಡಿ ಅಥವಾ ನಕಲಿ ಪ್ರಮಾಣಪತ್ರ/ದಾಖಲಾತಿಗಳನ್ನು ಸಲ್ಲಿಸಿ ನೌಕರಿ ಪಡೆದಿರುವುದು, ಯಾವುದೇ ಸಂದರ್ಭದಲ್ಲಿ ಕಂಡು ಬಂದಲ್ಲಿ ಅವರನ್ನು ಯಾವುದೇ ಮುನ್ಸೂಚನೆ ನೀಡದೆ ಯಾವುದೇ ಸಮಯದಲ್ಲಾದರೂ ನೌಕರಿಯಿಂದ ವಜಾ ಮಾಡಲಾಗುವುದು ಜೊತೆಗೆ ಅವರ ವಿರುದ್ಧ ಕಾನೂನು ರೀತಿಯ ಕ್ರಮ ತೆಗೆದುಕೊಳ್ಳಲಾಗುವುದು.
- ಅಭ್ಯರ್ಥಿಯು ಅರ್ಜಿಯಲ್ಲಿ ನೀಡುವ ವಿಳಾಸವೇ ಅಂತಿಮವಾಗಿದ್ದು, ಎಲ್ಲಾ ಪತ್ರ ವ್ಯವಹಾರಗಳನ್ನು ಅದೇ ವಿಳಾಸಕ್ಕೆ ಕಳುಹಿಸಿಕೊಡಲಾಗುವುದು. ನಂತರದಲ್ಲಿ ವಿಳಾಸ ಬದಲಾವಣೆ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ.
- ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆಯ ಪರೀಕ್ಷೆಗೆ ಹಾಜರಾಗಿ, ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಫಲಿತಾಂಶ ಪ್ರಕಟವಾಗದ ಪಕ್ಷದಲ್ಲಿ ಅಂತಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಂತಿಲ್ಲ.

- ಅರ್ಹ ಅಭ್ಯರ್ಥಿಗಳು ಆನ್ ಲೈನ್‌ನಲ್ಲಿ ಅರ್ಜಿಯನ್ನು ಭರ್ತಿ ಮಾಡುವ ಮೊದಲು ವೆಬ್ ಸೈಟ್‌ನಲ್ಲಿ ನೀಡಿರುವ ವಿವರವಾದ ಜಾಹೀರಾತು/ಸೂಚನೆಗಳನ್ನು/ವಿಧಾನವನ್ನು ತಿಳಿದುಕೊಳ್ಳುವುದು.
- ಅಭ್ಯರ್ಥಿಗಳ ಅರ್ಹತೆಯ ವಿಷಯದಲ್ಲಿ ಕ.ರ.ರಾ.ಸಾ ನಿಗಮದ ನಿರ್ಧಾರವೇ ಅಂತಿಮವಾಗಿರುತ್ತದೆ.
- ಆಯ್ಕೆಗೊಂಡು ಸೇವೆಯಲ್ಲಿ ಖಾಯಂಗೊಳ್ಳುವ ಅಭ್ಯರ್ಥಿಗಳು ಉಪದಾನ ಪಾವತಿ ಕಾಯ್ದೆ 1972 ರನ್ವಯ ಉಪಧನ ಪಡೆಯಲು ಅರ್ಹರಿರುತ್ತಾರೆ. ಮುಕ್ತ ವೇತನ ಶ್ರೇಣಿಗೆ ಅರ್ಹರಿರುವುದಿಲ್ಲ.
- ಎಸ್ ಎಸ್ ಎಲ್ ಸಿ ಅಥವಾ ತತ್ಸಮಾನ ಅಥವಾ ಮೇಲ್ದರ್ಜೆ ವಿದ್ಯಾರ್ಹತೆಯಲ್ಲಿ ಕನ್ನಡ ವಿಷಯವನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯಾಗಿ ಅಧ್ಯಯನ ಮಾಡದೆ ಇದ್ದಲ್ಲಿ ಆಯ್ಕೆಗೊಂಡ ಅಭ್ಯರ್ಥಿಗಳು ನಿಗಮದ ವತಿಯಿಂದ ನಡೆಸಲಾಗುವ ಕನ್ನಡ ಭಾಷಾ ಜ್ಞಾನ ಪರೀಕ್ಷೆಯಲ್ಲಿ ಒಂದೇ ಅವಕಾಶದಲ್ಲಿ ಉತ್ತೀರ್ಣರಾಗಬೇಕು ಇಲ್ಲದಿದ್ದಲ್ಲಿ ಅವರ ಆಯ್ಕೆಯನ್ನು ರದ್ದುಗೊಳಿಸಲಾಗುವುದು.
- ಆಯ್ಕೆ ಹೊಂದಿದ ಅಭ್ಯರ್ಥಿಯು ಸಾರ್ವಜನಿಕ ಉದ್ದಿಮೆ ಅಥವಾ ಕರ್ನಾಟಕ ಸರ್ಕಾರ ಅಥವಾ ಕೇಂದ್ರ ಸರ್ಕಾರದಲ್ಲಿ ಕೆಲಸ ನಿರ್ವಹಿಸುತ್ತಿದ್ದಲ್ಲಿ ಅಂತಹ ಅಭ್ಯರ್ಥಿಯು ಸೂಕ್ತ ಪ್ರಾಧಿಕಾರಸ್ಥರಿಂದ ಆಕ್ಷೇಪಣೆ ಇಲ್ಲವೆಂಬ ಪತ್ರವನ್ನು ಹುದ್ದೆಗೆ ವರದಿ ಮಾಡಿಕೊಳ್ಳುವಾಗ ಹಾಜರುಪಡಿಸತಕ್ಕದ್ದು.
- ಆಯ್ಕೆಗೆ ಸಂಬಂಧಿಸಿದಂತೆ ಅಭ್ಯರ್ಥಿಯು ಯಾವುದೇ ವಿಧವಾದ ಪ್ರಚಾರ ಮಾಡುವ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಲ್ಲಿ ಯಾವ ಮುನ್ಸೂಚನೆ ನೀಡದೆ ಅವರನ್ನು ಆಯ್ಕೆಗೆ ಅನರ್ಹಗೊಳಿಸಲಾಗುವುದು.
- ನೇಮಕಾತಿ ಪ್ರಕ್ರಿಯೆಗಳ ಬಗ್ಗೆ ಅಭ್ಯರ್ಥಿಗಳಿಂದ ಯಾವುದೇ ರೀತಿಯ ಪತ್ರ ವ್ಯವಹಾರ ಅಥವಾ ವಿಚಾರಣೆಗಳಿಗೆ ಆಸ್ಪದವಿರುವುದಿಲ್ಲ. ನೇಮಕಾತಿಯ ವಿವಿಧ ಹಂತಗಳಿಗೆ ಸಂಬಂದಿಸಿದ ಎಲ್ಲಾ ವಿವರಗಳನ್ನು ಸಂಸ್ಥೆಯ ವೆಬ್ ಸೈಟ್ www.ksrtcjobs.com ನಲ್ಲಿ ನೀಡಲಾಗಿರುತ್ತದೆ.
- ಆಯ್ಕೆಗೊಂಡ ಅಭ್ಯರ್ಥಿಗಳನ್ನು ಕ.ರಾ.ರ.ಸಾ.ನಿಗಮದ ವ್ಯಾಪ್ತಿಯ ವಿಭಾಗಗಳಿಗೆ ನಿಯೋಜಿಸಲಾಗುವುದು.
- ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಸಲ್ಲಿಸುವ ಅರ್ಜಿಯಲ್ಲಿ ನೀಡಲಾದ ವಿವರಗಳನ್ನು ಆದರಿಸಿ ನಿಗಮದ ವೆಬ್ ಸೈಟ್ www.ksrtcjobs.com ನಲ್ಲಿ ನಂತರ ತಿಳಿಸಲಾಗುವ ದಿನಾಂಕಗಳಲ್ಲಿ ಪ್ರವೇಶ ಪತ್ರದ ದ್ವಿಪ್ರತಿಯನ್ನು ಡೌನ್‌ಲೋಡ್ ಮಾಡಿಕೊಂಡು ಅದರಲ್ಲಿ ತಿಳಿಸಲಾಗುವ ನಿರ್ದೇಶನಗಳನ್ನು ಪಾಲಿಸುವುದು.
- ಅಭ್ಯರ್ಥಿಯು, ಪರೀಕ್ಷೆಯನ್ನು ಕನ್ನಡ ಅಥವಾ ಆಂಗ್ಲ ಮಾಧ್ಯಮದಲ್ಲಿ ಮಾತ್ರ ಬರೆಯಲು ಅವಕಾಶವಿದ್ದು, ಪರೀಕ್ಷೆ ಬರೆಯುವ ಭಾಷಾ ಮಾಧ್ಯಮ ಹಾಗೂ ಪರೀಕ್ಷಾ ಕೇಂದ್ರವನ್ನು ಒಮ್ಮೆ ನಮೂದಿಸಿದ ನಂತರ ಅದೇ ಅಂತಿಮವಾಗಿದ್ದು ಯಾವುದೇ ಕಾರಣಕ್ಕೂ ಬದಲಾವಣೆ ಮಾಡಲು ಅವಕಾಶ ಇರುವುದಿಲ್ಲ. ಆದುದರಿಂದ ಪರೀಕ್ಷೆ ಬರೆಯುವ ಭಾಷಾ ಮಾದ್ಯಮ ಮತ್ತು ಪರೀಕ್ಷಾ ಕೇಂದ್ರವನ್ನು ಸ್ಪಷ್ಟವಾಗಿ ಅರ್ಜಿಯಲ್ಲಿ ತಿಳಿಸುವುದು. ಅಭ್ಯರ್ಥಿಯು ಅರ್ಜಿಯಲ್ಲಿ ಕೋರಿರುವ ಭಾಷೆಯಲ್ಲಿ ಮಾತ್ರ ಪ್ರಶ್ನೆ ಪತ್ರಿಕೆಯನ್ನು ನೀಡಲಾಗುವುದು. ಎರಡೂ ಭಾಷಾ ಮಾದ್ಯಮಗಳಲ್ಲಿ ಪ್ರಶ್ನೆ ಪತ್ರಿಕೆಗಳನ್ನು ಕೋರಿದಲ್ಲಿ ನೀಡಲಾಗುವುದಿಲ್ಲ.
- ಮೂಲ ದಾಖಲಾತಿಗಳ ಪರಿಶೀಲನೆಗೆ ಅರ್ಹತೆ ಪಡೆದ ಅಭ್ಯರ್ಥಿಗಳು ಪರಿಶೀಲನಾ ಸಂದರ್ಭದಲ್ಲಿ ಅರ್ಜಿಯಲ್ಲಿ ನಮೂದಿಸಿರುವ ಪ್ರತಿಯೊಂದು ಮಾಹಿತಿಗೆ ಪೂರಕವಾದ ಮತ್ತು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದಂತೆ ಚಾಲ್ತಿಯಲ್ಲಿರುವ ಎಲ್ಲಾ ದಾಖಲಾತಿ ಃ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸಬೇಕು. ತಪ್ಪಿದಲ್ಲಿ ಸದರಿ ಅರ್ಹತೆ/ಸೌಲಭ್ಯಗಳನ್ನು ಕಳೆದುಕೊಳ್ಳುತ್ತಾರೆ. **ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಪಡೆದ ಯಾವುದೇ ಮೀಸಲಾತಿ ಪ್ರಮಾಣ ಪತ್ರಗಳನ್ನು ಪರಿಗಣಿಸುವುದಿಲ್ಲ.**
- ಅಭ್ಯರ್ಥಿಗಳು ನಿಗಮದ ವೆಬ್ ಸೈಟ್ www.ksrtcjobs.com ನಲ್ಲಿ ಆಗಿಂದಾಗ್ಗೆ ನೀಡುವ ಸೂಚನೆಗಳನ್ನು ಗಮನಿಸತಕ್ಕದ್ದು.

**ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ 04.02.2016.**
**ಅರ್ಜಿ ಶುಲ್ಕ ಪಾವತಿಸಲು ಕೊನೆಯ ದಿನಾಂಕ 06.02.2016.**

**ವ್ಯವಸ್ಥಾಪಕ ನಿರ್ದೇಶಕರು**

<u>ಪ್ರತಿಯನ್ನು ಃ ಆದರಪೂರ್ವಕವಾಗಿ ಃ</u>

1. ಉಪ ನಿರ್ದೇಶಕರು (ಕೇಂದ್ರಸ್ಥಾನ), ಸಮಾಜ ಕಲ್ಯಾಣ ಇಲಾಖೆ, ಡಾ/ಅಂಬೇಡ್ಕರ್ ಭವನ ವಸಂತನಗರ, ಬೆಂಗಳೂರು ರವರ ಮಾಹಿತಿಗಾಗಿ.
2. ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಕರ್ನಾಟಕ (ಎನ್‌ಫೋರ್ಸ್‌ಮೆಂಟ್ ಸೆಲ್) 4ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು-1 ರವರ ಮಾಹಿತಿಗಾಗಿ.
3. ನಿರ್ದೇಶಕರು, ವೃತ್ತಿ ಮತ್ತು ಉದ್ಯೋಗ ವಿನಿಮಯ ಕೇಂದ್ರ, ಸುಬ್ಬಯ್ಯ ರಸ್ತೆ ಬೆಂಗಳೂರು
4. ನಿರ್ದೇಶಕರು, ವೃತ್ತಿ ಮತ್ತು ಉದ್ಯೋಗ ತರಬೇತಿ 9/1, ಶ್ರೀ. ಪ್ರಕಾಶ ಕಾಂಪ್ಲೆಕ್ಸ್ ಪಿ. ಕಾಳಿಂಗ್‌ರಾವ್ ರಸ್ತೆ ಬೆಂಗಳೂರು.
5. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಸಾರಿಗೆ ಇಲಾಖೆ, ವಿಧಾನಸೌಧ ಬೆಂಗಳೂರು ರವರ ಮಾಹಿತಿಗಾಗಿ.
6. ಆಯುಕ್ತರು, ಅಂಗವಿಕಲ ವ್ಯಕ್ತಿಗಳ ಅಧಿನಿಯಮ ಕಚೇರಿ, ಅಭಯ ಸಂಕೀರ್ಣ, ರಿಸಾಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು – 560 020 ರವರ ಮಾಹಿತಿಗಾಗಿ.
7. ಎಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು ರವರ ಮಾಹಿತಿ ಹಾಗೂ ಜಾಹೀರಾತು ಪ್ರತಿಯನ್ನು ಸೂಚನಾ ಫಲಕದ ಮೇಲೆ ಪ್ರಕಟಿಸಲು ಕೋರಲಾಗಿದೆ.
8. ಎಲ್ಲಾ ಜಿಲ್ಲಾ ಉದ್ಯೋಗಾಧಿಕಾರಿಗಳು ರವರ ಮಾಹಿತಿ ಹಾಗೂ ಜಾಹೀರಾತು ಪ್ರತಿಯನ್ನು ಸೂಚನಾ ಫಲಕದ ಮೇಲೆ ಪ್ರಕಟಿಸಲು ಹಾಗೂ ತಮ್ಮ ಉದ್ಯೋಗ ವಿನಿಮಯ ಕಛೇರಿಯಲ್ಲಿ ಹೆಸರನ್ನು ನೊಂದಾಯಿಸಿದ ಅರ್ಹ ಅಭ್ಯರ್ಥಿಗಳಿಗೆ ಈ ಹುದ್ದೆಗೆ ಅರ್ಜಿ ಸಲ್ಲಿಸಲು ಸೂಚಿಸುವಂತೆ ಕೋರಲಾಗಿದೆ.

ಪ್ರತಿಯನ್ನು:

1. ವ್ಯವಸ್ಥಾಪಕ ನಿರ್ದೇಶಕರವರ ಹಿರಿಯ ಆಪ್ತ ಕಾರ್ಯದರ್ಶಿಗಳು, ಕರಾರಸಾನಿಗಮ ಕೇಂದ್ರಕಛೇರಿ, ಬೆಂಗಳೂರು ರವರ ಮಾಹಿತಿಗಾಗಿ.
2. ನಿರ್ದೇಶಕರು(ಸಿಬ್ಬಂದಿ:ಪರಿಸರ) / ನಿರ್ದೇಶಕರು(ಭದ್ರತಾ&ಜಾಗ್ರತಾ) / ನಿರ್ದೇಶಕರು(ತಾಂತ್ರಿಕ) / ಪ್ರಧಾನ ವ್ಯವಸ್ಥಾಪಕರು(ಸಿಬ್ಬಂದಿ) / ಮುಖ್ಯ ಲೆಕ್ಕಾಧಿಕಾರಿ ಹಾಗೂ ಆರ್ಥಿಕ ಸಲಹೆಗಾರರು ರವರ ಹಿರಿಯ/ಆಪ್ತ ಕಾರ್ಯದರ್ಶಿಗಳು, ಕರಾರಸಾನಿಗಮ, ಕೇಂದ್ರಕಛೇರಿ, ಬೆಂಗಳೂರು ರವರ ಮಾಹಿತಿಗಾಗಿ.
3. ವ್ಯವಸ್ಥಾಪಕ ನಿರ್ದೇಶಕರು ಬೆಂಮನಸಾಸಂಸ್ಥೆ/ವಾಕರಸಾಸಂಸ್ಥೆ/ಈಕರಸಾಸಂಸ್ಥೆ ರವರ ಆಪ್ತ ಕಾರ್ಯದರ್ಶಿಗಳು ರವರ ಮಾಹಿತಿಗಾಗಿ.
4. ಮುಖ್ಯ ಗಣಕ ವ್ಯವಸ್ಥಾಪಕರು, ಕರಾರಸಾನಿಗಮ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
5. ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು, ಬೆಂಮನಸಾಸಂಸ್ಥೆ/ವಾಕರಸಾಸಂಸ್ಥೆ/ಈಕರಸಾಸಂಸ್ಥೆ ರವರ ಮಾಹಿತಿಗಾಗಿ.
6. ಎಲ್ಲಾ ಇಲಾಖಾ ಮುಖ್ಯಸ್ಥರು, ಕರಾರಸಾನಿಗಮ/ಬೆಂಮನಸಾಸಂಸ್ಥೆ/ವಾಕರಸಾಸಂಸ್ಥೆ/ ಈಕರಸಾಸಂಸ್ಥೆ ರವರ ಮಾಹಿತಿಗಾಗಿ.
7. ಎಲ್ಲಾ ವಿಭಾಗ ಮುಖ್ಯಸ್ಥರು ಹಾಗೂ ಕಾರ್ಯ ವ್ಯವಸ್ಥಾಪಕರವರು, ಕರಾರಸಾನಿಗಮ/ ಬೆಂಮನಸಾಸಂಸ್ಥೆ/ವಾಕರಸಾಸಂಸ್ಥೆ/ಈಕರಸಾಸಂಸ್ಥೆ ರವರ ಮಾಹಿತಿಗಾಗಿ ಹಾಗೂ ಈ ಜಾಹೀರಾತನ್ನು ನೌಕರರ ಮಾಹಿತಿಗಾಗಿ ಸಂಬಂಧಪಟ್ಟ ವಿಭಾಗೀಯ ಕಛೇರಿ/ಪ್ರಾದೇಶಿಕ ಕಾರ್ಯಾಗಾರ/ಘಟಕಗಳಲ್ಲಿರುವ ಸೂಚನಾ ಫಲಕಗಳಲ್ಲಿ (ನೋಟೀಸ್ ಬೋರ್ಡ್) ಪ್ರಕಟಿಸಲು ಸೂಚಿಸಲಾಗಿದೆ.

**ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು (ನೇಮಕ)**